**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1073/2025**

| | | |
|---|---|---|
| ಸಾಕ್ಷಿದಾರರ ಹೆಸರು | : ಮಂಜುನಾಥ | ಪ್ರಾಸಾ-2 |
| ತಂದೆಯ ಹೆಸರು | : ಬಾಬು | ಚಾಸಾ-3 |
| ವಯಸ್ಸು | : 40 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 06.10.2025 |
| ವಾಸಸ್ಥಳ | : ಕಲ್ಲಾಟಗುಡ್ಡ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-2 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-1, 2, 3 ಮತ್ತು 4 ರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಅದನ್ನು ನಿಪಿ-1(ಬಿ), ನಿಪಿ-2(ಬಿ), ನಿಪಿ-3(ಬಿ) ಮತ್ತು ನಿಪಿ-4(ಬಿ) ಎಂದು ಗುರುತಿಸಲಾಯಿತು. ನಿಪಿ-5 ರ ಪೋಟೋದಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯು ಎಂ.ಒ.1 ಮತ್ತು 3 ರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಸಹಿಯನ್ನು ಎಂ.ಒ.1(ಬಿ) ಮತ್ತು 3(ಬಿ) ಎಂದು ಗುರುತಿಸಲಾಯಿತು.

ಕಳೆದ 1 ವರ್ಷದ ಹಿಂದೆ ಕಲ್ಲಾಟಗುಡ್ಡದ ರಸ್ತೆಯ ಬದಿಯಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ನಿಪಿ-1 ರಿಂದ 4 ಕ್ಕೆ ಸಹಿಯನ್ನು ಮಾಡಿರುತ್ತೇನೆ. ಸದರಿ ದಾಖಲಾತಿಗಳಲ್ಲಿ ಯಾವ ಅಂಶಗಳನ್ನು ಬರೆಯಲಾಗಿದೆ ಎಂದು ನಾನು ಕೇಳಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ ತಿಳಿಸಿರುವುದಿಲ್ಲ. ನಿಪಿ-5 ನ್ನು ಎಲ್ಲಿ ತೆಗೆಯಲಾಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ. ನಾನು ಸಹಿ ಮಾಡುವಾಗ ಎಷ್ಟು ಸಮಯವಾಗಿತ್ತು ಎಂದು ನನಗೆ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಸಾಕ್ಷಿಗೆ ದಿ.14.03.2025 ರ ತಮ್ಮ ಹೇಳಿಕೆಯನ್ನು ಸಂಪೂರ್ಣವಾಗಿ ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಸಂಪೂರ್ಣವಾಗಿ ಅಲ್ಲಗಳೆದಿರುತ್ತಾರೆ, ಆದ ಕಾರಣ ಸದರಿ ಹೇಳಿಕೆಯ ಭಾಗವನ್ನು ನಿಪಿ-9 ಎಂದು ಗುರುತಿಸಲಾಯಿತು. ನಾನು ಆರೋಪಿಯ ಅಂಗಡಿಯನ್ನು ಪರಿಶೀಲಿಸಿ ಪೋಲಿಸರು ಮದ್ಯವನ್ನು ವಶಪಡಿಸಿಕೊಂಡ ಬಾಬ್ತು ನಿಪಿ-1 ಕ್ಕೆ ಸಹಿ ಮಾಡಿರುವ ಬಗ್ಗೆ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ

ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**
**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.